# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಶಂಕರಾಚಾರಿ, ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯತ್, ದೇವನಹಳ್ಳಿ ಇವರ ವಿರುದ್ಧದ ಲೋಕಾಯುಕ್ತ ಇಲಾಖಾ ವಿಚಾರಣೆ – ಅಂತಿಮ ಆದೇಶ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 57 ಇಎನ್‌ಕ್ಯೂ 2018, ದಿನಾಂಕ:13.08.2018
2. ಅಪರ ನಿಬಂಧಕರು, ವಿಚಾರಣೆಗಳು-15, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ಇವರ ಇಲಾಖಾ ವಿಚಾರಣೆ ವರದಿ ಸಂಖ್ಯೆ: UPLOK-2/DE-399/2018/ARE-15, ದಿನಾಂಕ:28.12.2021
3. ಮಾನ್ಯ ಉಪ ಲೋಕಾಯುಕ್ತ ರವರ ಶಿಫಾರಸ್ಸು ವರದಿ ಸಂಖ್ಯೆ: UPLOK-2/DE.399/2018/ARE-15, ದಿನಾಂಕ: 03.01.2022

****

<u>ಪ್ರಸ್ತಾವನೆ :</u>

ಶ್ರೀ ಶಂಕರಾಚಾರಿ, ಹಿಂದಿನ ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯತ್, ದೇವನಹಳ್ಳಿ ಇವರು ಬಿಜ್ಜಾವರ ಗ್ರಾಮ ಪಂಚಾಯತ್ ವ್ಯಾಪ್ತಿಗೆ ಸೇರಿದ ಜಿ.ಹೊಸಹಳ್ಳಿ ಗ್ರಾಮದಲ್ಲಿ ನರೇಗಾ ಯೋಜನೆಯಲ್ಲಿ ಚಿಕ್ಕಮರಳಿ ಗ್ರಾಮಗಳ ಸಂಪರ್ಕ ರಸ್ತೆಯಲ್ಲಿ 2.5 ಲಕ್ಷ ರೂಪಾಯಿಗಳ ವೆಚ್ಚದಲ್ಲಿ ರಸ್ತೆ ಕಾಮಗಾರಿ ನಿರ್ವಹಿಸಿದೆ ಎಂದು ಸೂಚನಾ ಫಲಕ ಹಾಕಿದ್ದು, ಆದರೆ ಯಾವುದೇ ಕಾಮಗಾರಿಯನ್ನು ನಿರ್ವಹಿಸದೇ ಕರ್ತವ್ಯ ಲೋಪವೆಸಗಿರುತ್ತಾರೆಂದು ಶ್ರೀ ಹೆಚ್.ಜಿ.ಜಯತೀರ್ಥ, ಜಿ.ಹೊಸಹಳ್ಳಿ, ದೇವನಹಳ್ಳಿ ತಾಲ್ಲೂಕು ಇವರು ಲೋಕಾಯುಕ್ತ ಕಛೇರಿಗೆ ದೂರು ಸಲ್ಲಿಸಿದ ಮೇರೆಗೆ ಕರ್ನಾಟಕ ಲೋಕಾಯುಕ್ತ ಕಛೇರಿಯು ತನಿಖೆ ನಡೆಸಿ ಲೋಕಾಯುಕ್ತ ಕಾಯ್ದೆ ಕಲಂ 12(3)ರ ಅನುಸಾರ ಸಲ್ಲಿಸಿದ್ದ ವರದಿಯನ್ನು ಸರ್ಕಾರವು ಪರಿಶೀಲಿಸಿ, ಸದರಿ ಆಪಾದಿತ ನೌಕರರ ವಿರುದ್ಧದ ಆರೋಪಗಳು ಮೇಲ್ನೋಟಕ್ಕೆ ನಿಜವೆಂದು ಕಂಡುಬಂದ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸಲು ಸದರಿ ನಿಯಮಗಳ ನಿಯಮ 14(ಎ)ರನ್ವಯ ಪ್ರಕರಣವನ್ನು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಲಾಗಿತ್ತು.

ಸರ್ಕಾರದ ದಿನಾಂಕ:13.08.2018 ರ ಆದೇಶಾನುಸಾರ ಮಾನ್ಯ ಉಪಲೋಕಾಯುಕ್ತ ರವರು ಅಪರ ನಿಬಂಧಕರು, ವಿಚಾರಣೆಗಳು-15,ಕರ್ನಾಟಕ ಲೋಕಾಯುಕ್ತ,ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದ್ದು,ವಿಚಾರಣಾಧಿಕಾರಿಯವರು ಆಪಾದಿತರಾದ ಶ್ರೀ ಶಂಕರಾಚಾರಿ, ಹಿಂದಿನ ಕಿರಿಯ ಇಂಜಿನಿಯರ್ ಇವರ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ, ಇಲಾಖಾ ವಿಚಾರಣೆ ಕೈಗೊಂಡ ಸಂದರ್ಭದಲ್ಲಿ ಸದರಿಯವರು ದಿನಾಂಕ:01.10.2021ರಂದು ಮೃತರಾಗಿರುತ್ತಾರೆಂಬ ವಿಷಯವು ತಿಳಿದುಬಂದಿರುತ್ತದೆ. ಅಲ್ಲದೆ, ಪೊಲೀಸ್ ಇನ್ಸ್‌ಪೆಕ್ಟರ್, ಬೆಂಗಳೂರು ಗ್ರಾಮೀಣ ಲೋಕಾಯುಕ್ತ ಪೊಲೀಸ್ ಇವರು ಆಪಾದಿತರು ಮೃತಪಟ್ಟಿರುವ ಬಗ್ಗೆ ಮರಣ ದೃಢೀಕರಣ ಪತ್ರವನ್ನು ಸಲ್ಲಿಸಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧದ ಪ್ರಕರಣವನ್ನು ರದ್ದುಗೊಳಿಸುವಂತೆ ಮಾನ್ಯ ಉಪಲೋಕಾಯುಕ್ತರವರಿಗೆ ವಿಚಾರಣಾ ವರದಿಯನ್ನು ಸಲ್ಲಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತರವರು ವಿಚಾರಣಾ ವರದಿಗೆ ಸಹಮತಿಸಿ, ಸದರಿಯವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಮುಕ್ತಾಯಗೊಳಿಸುವಂತೆ ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ದಿನಾಂಕ:28.12.2021ರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

...2

ಸರ್ಕಾರವು ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರವರ ಶಿಫಾರಸ್ಸು ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿದೆ. ಬಿಜ್ಜಾವರ ಗ್ರಾಮ ಪಂಚಾಯತ್ ವ್ಯಾಪ್ತಿಗೆ ಸೇರಿದ ಜಿ.ಹೊಸಹಳ್ಳಿ ಗ್ರಾಮದಲ್ಲಿ ನರೇಗಾ ಯೋಜನೆಯಲ್ಲಿ ಚಿಕ್ಕಮರಳಿ ಗ್ರಾಮಗಳ ಸಂಪರ್ಕ ರಸ್ತೆಯಲ್ಲಿ 2.5 ಲಕ್ಷ ರೂಪಾಯಿಗಳ ವೆಚ್ಚದಲ್ಲಿ ರಸ್ತೆ ಕಾಮಗಾರಿಯನ್ನು ಕೈಗೊಂಡಿದ್ದು, ಇದನ್ನು ನಿರ್ವಹಿಸದೇ ಕರ್ತವ್ಯ ಲೋಪ ಎಸಗಿರುವ ಆರೋಪದಡಿ ಶ್ರೀ ಶಂಕರಾಚಾರಿ, ಹಿಂದಿನ ಕಿರಿಯ ಇಂಜಿನಿಯರ್ ಇವರ ವಿರುದ್ಧ ಲೋಕಾಯುಕ್ತ ಕಛೇರಿಯು ಇಲಾಖಾ ವಿಚಾರಣೆಯನ್ನು ಕೈಗೊಂಡ ಸಂದರ್ಭದಲ್ಲಿ ಆಪಾದಿತ ನೌಕರರು ದಿನಾಂಕ:01.10.2021ರಂದು ಮೃತರಾಗಿರುವ ವಿಷಯವು ತಿಳಿದುಬಂದಿರುತ್ತದೆ. ಹಾಗಾಗಿ ಮೃತ ಸರ್ಕಾರಿ ನೌಕರರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಆದ್ದರಿಂದ ವಿಚಾರಣಾಧಿಕಾರಿಯವರ ವರದಿಯನ್ನು ಒಪ್ಪಿ ದಿವಂಗತ ಶಂಕರಾಚಾರಿ, ಕಿರಿಯ ಇಂಜಿನಿಯರ್ ಇವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಈ ಹಂತಕ್ಕೆ ಮುಕ್ತಾಯಗೊಳಿಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ:-

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 05 ಇಎನ್‌ಕ್ಯೂ 2022,</u>**
**<u>ಬೆಂಗಳೂರು, ದಿನಾಂಕ:22.02.2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ದಿವಂಗತ ಶಂಕರಾಚಾರಿ, ಹಿಂದಿನ ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯತ್, ದೇವನಹಳ್ಳಿ ಇವರು ಇಲಾಖಾ ವಿಚಾರಣೆ ಚಾಲ್ತಿಯಲ್ಲಿರುವಾಗ ದಿ:01.10.2021 ರಂದು ಮೃತರಾಗಿರುವ ಕಾರಣ ಇವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಈ ಹಂತಕ್ಕೆ ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಕೆ. ನದೀಮ್ ಅಹ್ಮದ್)**
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**<u>ಇವರಿಗೆ:</u>**

1. ಮಹಾಲೇಖಪಾಲರು, (ಲೆಕ್ಕಪತ್ರ ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಎಂ.ಎಸ್.ಬಿಲ್ಡಿಂಗ್, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-15, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ಗ್ರಾಮಾಂತರ (ನೋಂದಾಯಿತ ಅಂಚೆ ಮುಖಾಂತರ)
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು – ಎ & ಸಿ).

**<u>ಪ್ರತಿಯನ್ನು ಮಾಹಿತಿಗಾಗಿ :</u>**

1. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.

..3

3. ಸರ್ಕಾರದ ಜಂಟಿ ಕಾರ್ಯದರ್ಶಿಗಳು(ಆಡಳಿತ-1),ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಶಾಖೆ.
4. ಹೆಚ್ಚುವರಿ ಪ್ರತಿ / ರಕ್ಷಾ ಕಡತ / ಕಂಪ್ಯೂಟರ್ ಸೆಲ್.